**ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ**
**ಸಿ.ವಿ.ರಾಮನ್‌ನಗರ ಉಪ ವಿಭಾಗ, ವಾರ್ಡ್ ಸಂಖ್ಯೆ:79, ಸರ್ವಜ್ಞನಗರ**
**ವಾರ್ಡ್ ಸಮಿತಿ ಸಭೆ, ದಿನಾಂಕ:06-06-2022 ರ ಸಭಾ ನಡವಳಿಗಳು**

ದಿನಾಂಕ: **06-06-2022** ರಂದು **ಬೆಳಗ್ಗೆ** 10.30 ಗಂಟೆಗೆ ವಾರ್ಡ್-79 ಸರ್ವಜ್ಞನಗರ ವ್ಯಾಪ್ತಿಯಲ್ಲಿ ವಾರ್ಡ್ ಸಮಿತಿಯ ಸಭೆಯನ್ನು ನೋಡೆಲ್ ಅಧಿಕಾರಿಯವರ ಅಧ್ಯಕ್ಷತೆಯಲ್ಲಿ ಎಂ.ಎಂ.ರಸ್ತೆಯಲ್ಲಿರುವ ಪಾಲಿಕೆಯ ಕಟ್ಟಡದಲ್ಲಿ ನಡೆದ ವಾರ್ಡ್ ಸಮಿತಿ ಸಭೆಯ ನಡುವಳಿಗಳು.

**ಸಭೆಯಲ್ಲಿ ಹಾಜರಿದ್ದ ವಾರ್ಡ್ ಸಮಿತಿ ಸದಸ್ಯರು ಹಾಗೂ ಆರ್.ಡಬ್ಲ್ಯೂ.ಎ**

1. ಶ್ರೀ.ಬಾಬು ಸದಸ್ಯರು
2. ಶ್ರೀನಾರಾಯಣ ಸ್ವಾಮಿ ಆರ್.ಡಬ್ಲ್ಯೂ.ಎ
3. ಶ್ರೀ.ಸಂಜೋರ್ಗ್ ಆರ್.ಡಬ್ಲ್ಯೂ.ಎ
4. ಶ್ರೀಮತಿ.ಅರುಣಾ ಬಾಲು ಆರ್.ಡಬ್ಲ್ಯೂ.ಎ
5. ಶ್ರೀ.ರೋಹಿತ್ ಸದಸ್ಯರು

**ಸಭೆಯಲ್ಲಿ ಹಾಜರಿದ್ದ ವಾರ್ಡ್ ಮಟ್ಟದ ಅಧಿಕಾರಿ/ನೌಕರರು**

1. ಶ್ರೀ.ಡಾ॥ಮಹಮೂದ್ ಅಬ್ಬಾಸ್ ನೋಡೆಲ್ ಅಧಿಕಾರಿಗಳು, ವಾರ್ಡ್ ಸಂಖ್ಯೆ:79, ಸರ್ವಜ್ಞನಗರ
2. ಶ್ರೀ.ನರಸಿಂಹಯ್ಯ ಸಹಾಯಕ ಅಭಿಯಂತರರು ಹಾಗೂ ವಾರ್ಡ್ ಸಮಿತಿ ಕಾರ್ಯದರ್ಶಿ ವಾರ್ಡ್ ಸಂಖ್ಯೆ:79, ಸರ್ವಜ್ಞನಗರ
3. ಶ್ರೀಮತಿ.ದಿವ್ಯ ಕಿರಿಯ ಆರೋಗ್ಯ ಪರಿವೀಕ್ಷಕರು
4. ಶ್ರೀ.ಮಲ್ಲಣ್ಣ, ಬಿಡಬ್ಲ್ಯೂಎಸ್‌ಎಸ್‌ಬಿ ಅಭಿಯಂತರರು

ಕಾರ್ಯದರ್ಶಿಗಳು ಸಭೆಗೆ ಆಗಮಿಸಿರುವ ಎಲ್ಲಾ ಇಲಾಖೆ ಹಾಗೂ ಸಾರ್ವಜನಿಕರಿಗೆ ಸ್ವಾಗತ ಕೋರಿದರು. ಹಾಗೂ ಹಿಂದಿನ ಸಭೆಯಲ್ಲಿ ಚರ್ಚಿಸಲಾಗಿರುವ ವಿಷಯಗಳ ಬಗ್ಗೆ ಸಭೆಯಲ್ಲಿ ತಿಳಿಸಲು ಕೋರಿ ಸಭೆಯನ್ನು ಆರಂಭಿಸಲಾಯಿತು.

**ಸಭೆಯಲ್ಲಿ ಚರ್ಚಿಸಿದ ವಿಷಯಗಳು:-**

| ಕ್ರ. ಸಂ | ಮಾಹಿತಿ | ಕ್ರಮ ವಹಿಸಬೇಕಾಗಿರುವ ಅಧಿಕಾರಿ |
|---|---|---|
| | **ಘನತ್ಯಾಜ್ಯ ನಿರ್ವಹಣೆ (SWM)** | |
| 1 | ವಾರ್ಡ್ ವ್ಯಾಪ್ತಿಯಲ್ಲಿ ಮನೆ-ಮನೆಯಿಂದ ಕಸ ಸಂಗ್ರಹಣೆ ನಿರ್ವಹಣೆ ಸಮರ್ಪಕವಾಗಿ ನಿರ್ವಹಿಸುತ್ತಿರುವುದಿಲ್ಲ ಮತ್ತು ಹಸಿ ಕಸ ಮತ್ತು ಒಣ ಕಸವನ್ನು ವಿಂಗಡಣೆ ಮಾಡುತ್ತಿಲ್ಲ ಎಂದು ಶ್ರೀ.ರೋಹಿತ್ ಸದಸ್ಯರು ತಿಳಿಸಿದರು. | Junior Health Inspector |
| 3 | ವಾರ್ಡ್ ವ್ಯಾಪ್ತಿಯಲ್ಲಿ ಘನತ್ಯಾಜ್ಯ ಸಂಗ್ರಹಣೆ ಸ್ಥಳದಲ್ಲಿ ಸಮರ್ಪಕವಾಗಿ ನಿರ್ವಹಿಸುತ್ತಿಲ್ಲ ಹಾಗೂ ಕಸ ಸಂಗ್ರಹಣೆಯಿಂದ ದುರ್ವಾಸನೆ ಬರುತ್ತಿರುತ್ತದೆ ಎಂದು ಸಭೆಯಲ್ಲಿ ದೂರಲಾಯಿತು. | Junior Health Inspector |
| 2 | ಕಲ್ಲಳ್ಳಿ ಸ್ಮಶಾಣದ ರಸ್ತೆ ಬದಿಯಲ್ಲಿರುವ ಕಸವನ್ನು ಮತ್ತು ಡೆಬ್ರಿಸ್ ತೆರವುಗೊಳಿಸಲು ಶ್ರೀ.ಸಂಜೋರ್ಗ್ ಆರ್.ಡಬ್ಲ್ಯೂ.ಎ ರವರು ಕೋರಿದರು. | Health Inspector |
| | **ಕಾಮಗಾರಿ ಇಲಾಖೆ (Engineering)** | |
| 1 | ರಾಮಕೃಷ್ಣಪ್ಪ ರಸ್ತೆ ಮತ್ತು ಚಾರ್ಲ್ ಕ್ಯಾಂಬೆಲ್ ರಸ್ತೆಯಲ್ಲಿ ರಸ್ತೆ ಡಾಂಬರೀಕರಣ ಮಾಡಲು ಸಭೆಯಲ್ಲಿ ಮತ್ತೊಮ್ಮೆ ಕೋರಿದರು.<br>ಅದರಂತೆ ಡಾಂಬರೀಕರಣ ರಸ್ತೆಗಳನ್ನು ಸ್ವಚ್ಛಮಾಡಲಾಗುತ್ತಿದೆ ಎಂದು ಸಹಾಯಕ ಅಭಿಯಂತರರು ತಿಳಿಸಿದರು. | Assistant Engineer-BBMP |
| 2 | ಕಾಕ್ಸ್‌ಟೌನ್‌ನ ಎಂ.ಎಂ.ರಸ್ತೆಯಲ್ಲಿರುವ ನಿರ್ಮಾಣವಾಗಿರುವ ಮಾರುಕಟ್ಟೆ ಕಟ್ಟಡವನ್ನು ಶೀಘ್ರವಾಗಿ ಪ್ರಾರಂಭಿಸಿ ಸಾರ್ವಜನಿಕರಿಗೆ ಅನುಕೂಲ ಮಾಡಿಕೊಡಲು ಸೂಚಿಸಿದರು. | Assistant Engineer-BBMP |

| | | |
|---|---|---|
| 4 | ವಾರ್ಡ್ ವ್ಯಾಪ್ತಿಯಲ್ಲಿ ಸಿ.ಸಿ.ಕ್ಯಾಮೆರಾಗಳನ್ನು ಅಳವಡಿಸಲು ಸೂಚಿಸಿದರು | **Assistant Engineer-BBMP** |
| | **ಬೆಂಗಳೂರು ಜಲ ಮಂಡಳಿ (BWSSB)** | |
| 1 | ರಾಮಕೃಷ್ಣಪ್ಪ ರಸ್ತೆ ಮತ್ತು ಚಾರ್ಲ್ ಕ್ಯಾಂಬೆಲ್ ರಸ್ತೆಯಲ್ಲಿ ಸ್ಯಾನಿಟರಿ ಪೈಪ್‌ಗಳನ್ನು ಅಳವಡಿಸಲು ಸಭೆಯಲ್ಲಿದ್ದ ಸದಸ್ಯರು ಕೋರಿದರು. | **Assistant Engineer-BWSSB** |
| | **ಬಿ.ಬಿ.ಎಂ.ಪಿ ಸ್ಟ್ರೀಟ್‌ಲೈಟ್ಸ್ (Street Lights)** | |
| 1 | ವಾರ್ಡ್ ವ್ಯಾಪ್ತಿಯಲ್ಲಿ ಬೀದಿಗಳು ಸರಿಯಾಗಿ ಕಾರ್ಯನಿರ್ವಹಿಸುತ್ತಿರುವುದಿಲ್ಲವೆಂದು ದೂರನ್ನು ನೀಡಲಾಯಿತು. | **Assistant Engineer-Street Lights** |

ಮುಂದಿನ ಸಭೆಯ ಒಳಗಾಗಿ ಸಂಬಂಧಪಟ್ಟ ಅಧಿಕಾರಿಗಳು ಕೂಡಲೇ ಕ್ರಮ ವಹಿಸಿ, ಕಾರ್ಯದರ್ಶಿ ವಾರ್ಡ್ ಸಮಿತಿ ಇವರಿಗೆ ಅನುಪಾಲನಾ ವರದಿಯನ್ನು ನೀಡುವುದು.

ಕಾರ್ಯದರ್ಶಿಗಳು ವಂದನೆಗಳೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಿದರು.

**ಕಾರ್ಯದರ್ಶಿಗಳು**

ಶ್ರೀ.ನರಸಿಂಹಯ್ಯ
ಸಹಾಯಕ ಅಭಿಯಂತರರು(ಪ್ರಭಾರ)
ವಾರ್ಡ್ ಸಂಖ್ಯೆ:79 ಸರ್ವಜ್ಞನಗರ

ಅಧ್ಯಕ್ಷರು

ಡಾ.ಮಹಮೂದ್ ಅಬ್ಬಾಸ್
ನೋಡಲ್ ಅಧಿಕಾರಿಗಳು
ವಾರ್ಡ್ ಸಂಖ್ಯೆ:79-ಸರ್ವಜ್ಞನಗರ